<u>ಕರ್ನಾಟಕ ವಿಧಾನ ಪರಿಷತ್ತು</u>

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 122 |
| ಮಾನ್ಯ ಸದಸ್ಯರ ಹೆಸರು | ಶ್ರೀ.ಪಿ.ಹೆಚ್.ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 09.12.2024 |
| ಉತ್ತರಿಸುವ ಸಚಿವರು | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಬಾಗಲಕೋಟೆ ಜಿಲ್ಲಾ ಆಸ್ಪತ್ರೆಯಲ್ಲಿ ಬಡರೋಗಿಗಳ ರೋಗ ಪತ್ತೆಗಾಗಿ ಕೇವಲ ಸಿಟಿಸ್ಕ್ಯಾನ್ ಯಂತ್ರ ಮಾತ್ರವೇ ಲಭ್ಯವಿದ್ದು, ರೋಗದ ಸ್ಪಷ್ಟ ಮತ್ತು ಖಚಿತ ಮಾಹಿತಿ ತಿಳಿಯಲು M.R.I ಯಂತ್ರದ ಲಭ್ಯತೆ ಇಲ್ಲದ ಕಾರಣಕ್ಕಾಗಿ ಬಡರೋಗಿಗಳನ್ನು ದೂರದ ವಿಜಯಪುರ, ಹುಬ್ಬಳ್ಳಿ, ಬೆಳಗಾವಿ ನಗರಗಳಿಗೆ ಸೂಚಿಸುವ ಅನಿವಾರ್ಯತೆ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ, ಹಾಗಿದ್ದಲ್ಲಿ, M.R.I ಯಂತ್ರಗಳನ್ನು ಯಾವಾಗ ಒದಗಿಸಲಾಗುವುದು; | ರಾಷ್ಟ್ರೀಯ ಆರೋಗ್ಯ ಅಭಿಯಾನದ ರಾಷ್ಟ್ರೀಯ ಉಚಿತ ರೋಗ ಪತ್ತೆ ಸೇವೆಗಳ ಕಾರ್ಯಕ್ರಮದ ಅಡಿಯಲ್ಲಿ ಬಾಗಲಕೋಟೆ ಜಿಲ್ಲೆಗೆ M.R.I Scan ಸೇವೆಯನ್ನು PPP ಮಾದರಿಯಲ್ಲಿ ಸಾರ್ವಜನಿಕರಿಗೆ ಉಚಿತವಾಗಿ ಒದಗಿಸಲು ಸಂಖ್ಯೆ:ಆಕುಕ 160 ಎಫ್‌ಪಿಆರ್ 2022 ದಿನಾಂಕ:19.08.2023ರಲ್ಲಿ ಅನುಮೋದನೆ ನೀಡಲಾಗಿದೆ. ಇದರನ್ವಯ M.R.I ಸೇವೆಯನ್ನು ಒದಗಿಸಲು ಕಾರ್ಯ ಪ್ರಗತಿಯಲ್ಲಿದ್ದು, ಅತೀ ಶೀಘ್ರವಾಗಿ ಸಾರ್ವಜನಿಕರಿಗೆ ಸೇವೆಯನ್ನು ಒದಗಿಸಲಾಗುವುದು. |
| ಆ) | ಬಾಗಲಕೋಟೆ ಜಿಲ್ಲಾ ಕೇಂದ್ರವಿದ್ದು, ಕೇಂದ್ರ ಸರ್ಕಾರದ ಅನುದಾನದಿಂದ ಕ್ರಿಟಿಕಲ್ ಕೇರ್ ಸಂಟರ್ ಮಾತ್ರ ಆಸ್ಪತ್ರೆಯಲ್ಲಿ ಇದ್ದು, ಸುತ್ತಲು ರಾಷ್ಟ್ರೀಯ ಹೆದ್ದಾರಿ ಹಾದು ಹೋಗುವುದರಿಂದ ಅಪಘಾತಗಳು ಹೆಚ್ಚಾಗಿ ಗಾಯಾಳುಗಳಿಗಾಗಿ ಟ್ರೌಮ ಸೆಂಟರ್‌ನ ಅವಶ್ಯಕತೆಯಿರುವುದು ಸರ್ಕಾರ ಗಮನಿಸಿದೆಯೇ, ಹಾಗಿದ್ದಲ್ಲಿ, ಯಾವಾಗ ಟ್ರಾಮಾ (Trauma) ಸೆಂಟರ್ ಸ್ಥಾಪನೆ ಮಾಡಲಾಗುವುದು? | ಕೇಂದ್ರ ಸರ್ಕಾರದ ರಾಷ್ಟ್ರೀಯ ಅಪಘಾತ ಮತ್ತು ಸುಟ್ಟ ಗಾಯಗಳ ತಡೆಗಟ್ಟುವಿಕೆ ಮತ್ತು ನಿರ್ವಹಣಾ ಕಾರ್ಯಕ್ರಮದ ಮಾರ್ಗಸೂಚಿಯನ್ವಯ ರಾಷ್ಟ್ರೀಯ ಮತ್ತು ರಾಜ್ಯ ಹೆದ್ದಾರಿಗಳಲ್ಲಿನ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಆಸ್ಪತ್ರೆಗಳಲ್ಲಿನ ತುರ್ತು ಚಿಕಿತ್ಸಾ ವಿಭಾಗವನ್ನು ಮೇಲ್ದರ್ಜೆಗೇರಿಸಿ ಅಪಘಾತಕ್ಕೆ ಒಳಗಾದ ರೋಗಿಗಳಿಗೆ ಸೂಕ್ತ ಚಿಕಿತ್ಸೆ ನೀಡಲಾಗುವುದು.<br><br>ಕರ್ನಾಟಕ ರಾಜ್ಯ ರಸ್ತೆ ಸುರಕ್ಷತಾ ಪ್ರಾಧಿಕಾರದ ಅನುದಾನದಿಂದ ಜಿಲ್ಲಾ ಆಸ್ಪತ್ರೆ ಬಾಗಲಕೋಟೆಯನ್ನು ಮೇಲ್ದರ್ಜೆಗೇರಿಸುವ ನಿಟ್ಟಿನಲ್ಲಿ ಅಗತ್ಯ ವೈದ್ಯಕೀಯ ಉಪಕರಣಗಳನ್ನು ಖರೀದಿಸಲು ಟೆಂಡರ್ ಪ್ರಕ್ರಿಯೆಯು |

Scanned with CamScanner

| | | |
|---|---|---|
| | | ಚಾಲ್ತಿಯಲ್ಲಿದ್ದು, ಟೆಂಡರ್ ಪ್ರಕ್ರಿಯೆ ಮುಗಿದ ನಂತರ ವೈದ್ಯಕೀಯ ಉಪಕರಣಗಳನ್ನು ಒದಗಿಸಲಾಗುವುದು ಹಾಗೂ ರಸ್ತೆ ಅಪಘಾತಕ್ಕೆ ಒಳಗಾದ ಗಾಯಾಳುಗಳನ್ನು ರವಾನಿಸಲು ಒಂದು ಸುಸಜ್ಜಿತ ಅಡ್ವಾನ್ಸ್ ಲೈಫ್ ಸಪೋರ್ಟ್ ಆಂಬ್ಯುಲೆನ್ಸ್‌ನ್ನು ವಿತರಿಸಲಾಗಿದೆ ಹಾಗೂ ಅವಶ್ಯಕವಿದ್ದಲ್ಲಿ ಹೆಚ್ಚಿನ ಚಿಕಿತ್ಸೆಗಾಗಿ ಮೇಲ್ದರ್ಜೆಯ ಆಸ್ಪತ್ರೆಗಳಿಗೆ ತುರ್ತು ಸಾರಿಗೆ ವ್ಯವಸ್ಥೆಯನ್ನು ಒದಗಿಸಲಾಗುವುದು.<br><br>ರಾಷ್ಟ್ರೀಯ ಅಪಘಾತ ಮತ್ತು ಸುಟ್ಟ ಗಾಯಗಳ ತಡೆಗಟ್ಟುವಿಕೆ ಮತ್ತು ನಿರ್ವಹಣಾ ಕಾರ್ಯಕ್ರಮದ ಮಾರ್ಗಸೂಚಿಯನ್ವಯ ಪ್ರತ್ಯೇಕ ಟ್ರಾಮಾ ಕೇರ್ ಸೆಂಟರ್‌ಗಳನ್ನು ಕಲ್ಪಿಸಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲ. |

ಆಕುಕ 71 ಎಸ್ ಟಿ ಕ್ಯೂ 2024

**ದಿನೇಶ್ ಗುಂಡೂರಾವ್**

**ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು**

Scanned with CamScanner